# **ಕರ್ನಾಟಕ ವಿಧಾನ ಪರಿಷತ್ತು**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್. ರವಿ ರವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಸಂವಿಧಾನದ ಪರಿಶಿಷ್ಟ 11 ರ ಅನ್ವಯ ಗ್ರಾಮ ಪಂಚಾಯತಿಗಳಿಗೆ ವಹಿಸಿರುವ 29 ವಿಷಯಗಳಿಗೆ ಸಂಬಂಧಿಸಿದ ಇಲಾಖೆಗಳು ಹಾಗೂ ಇಲಾಖೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ ರಾಜ್ ಅಧಿನಿಯಮ 1993 ರ ಪ್ರಕರಣ 61–ಎ ಅಡಿಯಲ್ಲಿ ರಚಿಸಲ್ಪಡುವ ಉಪ ಸಮಿತಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಲು ಮತ್ತು ಈ ಅಧಿನಿಯಮದ ಮೂಲ ಆಶಯದಂತೆ ಅಧಿಕಾರಿ ವಿಕೇಂದ್ರಿಕರಣಗೊಳಿಸಿ ಗ್ರಾಮ ಪಂಚಾಯತಿಗಳನ್ನು ಪರಿಪೂರ್ಣ ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಹಾಗೂ ಆರ್ಥಿಕವಾಗಿ ಸದೃಢಗೊಳಿಸಲು ಅನುಕೂಲವಾಗುವಂತೆ ಪರಿಣಾಮಕಾರಿ ನಿಯಮಗಳನ್ನು ರೂಪಿಸುವ ಕುರಿತು.

****

**ಉತ್ತರ:** ಸಂವಿಧಾನದ 73 ನೇ ತಿದ್ದುಪಡಿಯನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ ರಾಜ್ ಅಧಿನಿಯಮ 1993 ರಲ್ಲಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಪ್ರಕಾರ್ಯಗಳನ್ನು ನಿರ್ದಿಷ್ಟಪಡಿಸಲಾಗಿದೆ. ತಳ ಹಂತದಲ್ಲಿ ಸ್ವಯಂ ಆಡಳಿತ ಘಟಕಗಳಾಗಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿಗಳು ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನದಲ್ಲಿ ಜನರ ಭಾಗವಹಿಸುವಿಕೆಯನ್ನು ಖಾತರಿಪಡಿಸಲು ಜನ ವಸತಿ, ವಾರ್ಡ ಸಭೆ ಮತ್ತು ಗ್ರಾಮ ಸಭೆಗಳಿಗೆ ಹೆಚ್ಚಿನ ಅಧಿಕಾರ ನೀಡಲಾಗಿದೆ. ಹಾಗೆಯೇ ಪ್ರಕರಣ 61ಎ ರಡಿ ಗ್ರಾಮ ಪಂಚಾಯತ ಸಮಿತಿಗಳ ಅಡಿಯಲ್ಲಿ ಸಮುದಾಯದ ಪ್ರತಿನಿಧಿಗಳ ಪಾಲ್ಗೊಳ್ಳುವಿಕೆಯ ಮೂಲಕ ಕಾರ್ಯನಿರ್ವಹಿಸಲು ವಿಷಯವಾರು ಉಪ ಸಮಿತಿಗಳನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ಈ ಕೆಳಕಂಡಂತೆ ಸಮಿತಿಗಳನ್ನು ರಚಿಸಲಾಗಿದೆ.

1) ಬಾಲವಿಕಾಸ ಸಮಿತಿ.
2) ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ಮತ್ತು ಬಾಲ್ಯ ವಿವಾಹ ಸಮಿತಿ.
3) ಜಲಾನಯನ ಅಭಿವೃದ್ಧಿ ನಿರ್ವಹಣಾ ಸಮಿತಿ.
4) ನ್ಯಾಯ ಬೆಲೆ ಅಂಗಡಿ ಮಟ್ಟದ ಜಾಗೃತ ಸಮಿತಿ.
5) ಕೆರೆ ಅಭಿವೃದ್ಧಿ ನಿರ್ವಹಣಾ ಸಮಿತಿ.
6) ಗ್ರಾಮೀಣ ನೀರು ಸರಬರಾಜು ಮತ್ತು ಸ್ವಚ್ಛತಾ ಸಮಿತಿ.
7) ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ.
8) ಗ್ರಾಮೀಣ ಅರಣ್ಯ ಸಮಿತಿ.
9) ಜೀವ ವೈವಿಧ್ಯ ನಿರ್ವಹಣಾ ಸಮಿತಿ.
10) ಗ್ರಾಮ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಠಿಕಾಂಶ ಸಮಿತಿ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ ರಾಜ್ ಅಧಿನಿಯಮ 1993 ರ ಪ್ರಕರಣ 61ಎ ರಡಿ ಮೇಲಿನಂತೆ ರಚಿಸಲಾಗಿರುವ ಉಪ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಸಮಿತಿಗಳ ರಚನೆ, ಕಾರ್ಯ ಕಲಾಪಗಳನ್ನು ನಡೆಸುವ ವಿಧಾನ ಹಾಗೂ ಜವಾಬ್ದಾರಿಗಳ ಬಗ್ಗೆ ವಿಸ್ತೃತವಾಗಿ ಈ ಕೆಳಕಂಡಂತೆ ನಿಯಮಗಳು/ ಉಪವಿಧಿಗಳನ್ನು ರಚಿಸಲಾಗಿದೆ.

| ಕ್ರ.ಸಂ | ಅಧಿಸೂಚನೆ ಸಂಖ್ಯೆ ಮತ್ತು ದಿನಾಂಕ: | ನಿಯಮಗಳು/ಉಪವಿಧಿಗಳು |
|---|---|---|
| 1 | ಅಧಿಸೂಚನೆ ಸಂಖ್ಯೆ: ಗ್ರಾಅಪ 657 ಗ್ರಾಪಂಅ 2019, ದಿನಾಂಕ:05-06-2020. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಬಾಲವಿಕಾಸ ಸಮಿತಿ) ನಿಯಮಗಳು, 2020 |
| 2 | ಅಧಿಸೂಚನೆ ಸಂಖ್ಯೆ: ಗ್ರಾಅಪ 660 ಗ್ರಾಪಂಅ 2020, ದಿನಾಂಕ: 17-11-2020. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ) ನಿಯಮಗಳು, 2020 |
| 3 | ಅಧಿಸೂಚನೆ ಸಂಖ್ಯೆ: ಗ್ರಾಅಪ 1309 ಗ್ರಾಪಂಅ 2017, ದಿನಾಂಕ:17-01-2020. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಗ್ರಾಮ ಪಂಚಾಯಿತಿಗಳ (ಕೆರೆ ಅಭಿವೃದ್ಧಿ ಮತ್ತು ನಿರ್ವಹಣಾ ಸಮಿತಿ) ಉಪವಿಧಿಗಳು, 2019. |
| 4 | ಅಧಿಸೂಚನೆ ಸಂಖ್ಯೆ: ಗ್ರಾಅಪ 507 ಗ್ರಾಪಂಅ 2019, ದಿನಾಂಕ:17-11-2020. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿ) ನಿಯಮಗಳು, 2020. |
| 5 | ಅಧಿಸೂಚನೆ ಸಂಖ್ಯೆ: ಗ್ರಾಅಪ 870 ಗ್ರಾಪಂಅ 2019, ದಿನಾಂಕ: 17-11-2020. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಠಿಕ ಸಮಿತಿ) ನಿಯಮಗಳು, 2020. |
| 6 | ಅಧಿಸೂಚನೆ ಸಂಖ್ಯೆ: ಗ್ರಾಅಪ 770 ಗ್ರಾಪಂಅ 2019, ದಿನಾಂಕ: 17-11-2021. | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಜೀವ ವೈವಿಧ್ಯ ನಿರ್ವಹಣಾ ಸಮಿತಿ) ನಿಯಮಗಳು, 2021. |
| 7 | ಅಧಿಸೂಚನೆ ಸಂಖ್ಯೆ: ಇಡಿ 11 ಪಿಬಿಎಸ್ 2008, ದಿನಾಂಕ: 7-02-2009. | ಕರ್ನಾಟಕ ಗ್ರಾಮ ಪಂಚಾಯಿತಿಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳು (ಮಾದರಿ) ಉಪವಿಧಿಗಳು, 2006. |

ಮೇಲ್ಕಂಡ ನಿಯಮಗಳು/ಉಪವಿಧಿಗಳನ್ನು ಗ್ರಾಮ ಪಂಚಾಯತಿಗಳು ಅಳವಡಿಸಿಕೊಂಡು ನಿಯಮಾನುಸಾರ ಕಾರ್ಯನಿರ್ವಹಿಸಬಹುದಾಗಿದೆ.

ಸಂಖ್ಯೆ: ಗ್ರಾಅಪ 82 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.